# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **1037** |
| ಸದಸ್ಯರ ಹೆಸರು | : | ಶ್ರೀ. ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | ೨೧/೦೯/೨೦೨೦ |
| ಉತ್ತರಿಸುವ ಸಚಿವರು | : | **ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| ಅ | ಪಟ್ಟಣ ಪಂಚಾಯಿತಿಗಳನ್ನು "ಪುರಸಭೆ" ಗಳನ್ನಾಗಿ ಮೇಲ್ದರ್ಜೆಗೇರಿಸುವಾಗ ಅನುಸರಿಸುವ ನಿಯಮಗಳೇನು; | ಪಟ್ಟಣ ಪಂಚಾಯಿತಿಯಿಂದ ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ಕಲಂ ನಿಯಮ 3(1), 3(2) ಮತ್ತು 9 ಗಳನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತದೆ:<br>1. ಆ ಪ್ರದೇಶದ ಜನಸಂಖ್ಯೆ 20,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 50,000 ಕ್ಕೆ ಹೆಚ್ಚಿಲ್ಲದಂತಿರಬೇಕು;<br>2. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದರ ಕಿ.ಮೀ. ವಿಸ್ತೀರ್ಣಕ್ಕೆ 1,500 ಕ್ಕಿಂತ ಕಡಿಮೆ ಇಲ್ಲದಿರುವುದು;<br>3. ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಬತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬರಿಗೆ 45 ರೂಪಾಯಿಗಳ ದರದಂತೆ ಲೆಕ್ಕಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರದ ಹೊರತು;<br>4. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50 ಕ್ಕಿಂತ ಕಡಿಮೆ ಇಲ್ಲದಿರುವುದು. |
| ಆ | ಕಳೆದ 02 ವರ್ಷಗಳಲ್ಲಿ ರಾಜ್ಯಾದ್ಯಂತ ಎಷ್ಟು ಪಟ್ಟಣ ಪಂಚಾಯಿತಿಗಳನ್ನು "ಪುರಸಭೆ" ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ; (ವಿವರ ನೀಡುವುದು) | ಕಳೆದ ಎರಡು ವರ್ಷಗಳಲ್ಲಿ ಯಾವುದೇ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಿರುವುದಿಲ್ಲ. |
| ಇ | ಬಾಗಲಕೋಟೆ ಜಿಲ್ಲೆಯಲ್ಲಿ ಬೀಳಗಿ ಪಟ್ಟಣ ಪಂಚಾಯಿತಿಯನ್ನು "ಪುರಸಭೆ" ಯನ್ನಾಗಿ ಮೇಲ್ದರ್ಜೆಗೇರಿಸಬೇಕೆನ್ನುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೀಳಗಿ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಸೂಕ್ತ ಪ್ರಸ್ತಾವನೆ ಕಳುಹಿಸುವಂತೆ ಪೌರಾಡಳಿತ ನಿರ್ದೇಶನಾಲಯದಿಂದ ಜಿಲ್ಲಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ ರವರನ್ನು ಕೋರಲಾಗಿರುತ್ತದೆ. ಪ್ರಸ್ತಾವನೆಯು ಸ್ವೀಕೃತವಾದ ನಂತರ ನಿಯಮಾನುಸಾರ ಪರಿಶೀಲಿಸಲಾಗುವುದು. |
| ಈ | ಹಾಗಿದ್ದಲ್ಲಿ, ಸದರಿ ಬೀಳಗಿ ಪಟ್ಟಣ ಪಂಚಾಯಿತಿಯನ್ನು "ಪುರಸಭೆ" ಯನ್ನಾಗಿ ಮೇಲ್ದರ್ಜೆಗೇರಿಸುವಲ್ಲಿ ವಿಳಂಬ ವಾಗುತ್ತಿರುವುದಕ್ಕೆ ಕಾರಣಗಳೇನು; | ಅನ್ವಯಿಸುವುದಿಲ್ಲ |
| ಉ | ಯಾವ ಕಾಲಮಿತಿಯಲ್ಲಿ ಸದರಿ ಬೀಳಗಿ ಪಟ್ಟಣ ಪಂಚಾಯಿತಿಯನ್ನು "ಪುರಸಭೆ" ಯನ್ನಾಗಿ ಮೇಲ್ದರ್ಜೆಗೇರಿಸಲಾಗುವುದು? | |

**ಸಂಖ್ಯೆ:ನಅಇ 36 ಎಲ್‌ಸಿಕ್ಯೂ 2020.**

(ನಾರಾಯಣ ಗೌಡ)

**ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು**